# ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ

(ಕರ್ನಾಟಕ ಸರ್ಕಾರದ ಅಧೀನ ಸಂಸ್ಥೆ)

ನಂ. 49, 4 ಮತ್ತು 5ನೇ ಮಹಡಿ, 'ಈಸ್ಟ್ ವಿಂಗ್', ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು - 560 001

ದೂರವಾಣಿ : 080-22265383 ಫ್ಯಾಕ್ಸ್ : 080-22267901

ವೆಬ್‌ಸೈಟ್ : www.kiadb.in ಇ-ಮೇಲ್ : ceoemkiadb@gmail.com

ಸಂಖ್ಯೆ: ಕ.ಕೈ.ಪ್ರ.ಮಂ/ಕೇಂ:ಕ/ಆಡಳಿತ-63(3)/444/2019-20 ದಿನಾಂಕ:12-04-2019.

## : : ಸುತ್ತೋಲೆ : :

ವಿಷಯ: ಲೋಕಸಭೆ ಚುನಾವಣೆ-2019ರ ಮತದಾನ ದಿನದಂದು ಕಡ್ಡಾಯವಾಗಿ ವೇತನ ಸಹಿತ ರಜೆ ಘೋಷಿಸುವ ಬಗ್ಗೆ.

ಉಲ್ಲೇಖ:
1. ಅಧೀನ ಕಾರ್ಯದರ್ಶಿ, ಭಾರತೀಯ ಚುನಾವಣಾ ಆಯೋಗ, ಇವರ ಪತ್ರ ಸಂಖ್ಯೆ :78/2019 ಇಪಿಎಸ್ ದಿ:22-03-2019.
2. ಸರ್ಕಾರದ ಅಧೀನ ಕಾರ್ಯದರ್ಶಿ, ವಾ ಮತ್ತು ಕೈ ಇಲಾಖೆ, ಇವರ ಪತ್ರ ಸಂಖ್ಯೆ:ವಾಕೈ/2/ಸ್ವೀಮರ/2019 ದಿ:02-04-2019.
3. ಸರ್ಕಾರದ ಅಧೀನ ಕಾರ್ಯದರ್ಶಿ-1, ಸಿಆಸುಇ, ಇವರ ಅಧಿಸೂಚನೆ ಸಂಖ್ಯೆ:ಸಿಆಸುಇ 16 ಹೆಚ್‌ಹೆಚ್‌ಎಲ್-2019 ದಿ:09-04-2019

* * * *

ಭಾರತ ಚುನಾವಣಾ ಆಯೋಗವು ಲೋಕಸಭೆಗೆ ಸಾರ್ವತ್ರಿಕ ಚುನಾವಣೆ-2019 ಅನ್ನು ಘೋಷಿಸಿದ್ದು, ಕರ್ನಾಟಕದಲ್ಲಿ ಮೊದಲ ಹಂತದಲ್ಲಿ 14 ಲೋಕಸಭಾ ಕ್ಷೇತ್ರಗಳಿಗೆ ದಿನಾಂಕ:18-04-2019 ರ ಗುರುವಾರದಂದು ಮತ್ತು ಇನ್ನುಳಿದ 14 ಲೋಕಸಭಾ ಕ್ಷೇತ್ರಗಳಿಗೆ ಎರಡನೇ ಹಂತದಲ್ಲಿ ದಿನಾಂಕ:23-04-2019 ರ ಮಂಗಳವಾರದಂದು ಚುನಾವಣೆಯನ್ನು ನಡೆಸಲು ಉದ್ದೇಶಿಸಿರುತ್ತದೆ.

ಈ ಹಿನ್ನಲೆಯಲ್ಲಿ ಸರ್ಕಾರವು ಉಲ್ಲೇಖ (3)ರ ಅಧಿಸೂಚನೆಯನ್ವಯ ಆಯಾ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವಂತಹ ಮತದಾರರರು ಮತ ಚಲಾಯಿಸಲು ಅನುಕೂಲವಾಗುವಂತೆ ಸದರಿ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವ ಎಲ್ಲಾ ರಾಜ್ಯ ಸರ್ಕಾರಿ ಕಛೇರಿಗಳಿಗೆ ಹಾಗೂ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಗೆ ದಿನಾಂಕ:18-04-2019 ಮತ್ತು 23-04-2019 ರಂದು ಆಯಾ ಚುನಾವಣಾ ಕ್ಷೇತ್ರಗಳಿಗೆ ಸೀಮಿತಗೊಳಿಸಿ ಸಾರ್ವತ್ರಿಕ ರಜೆಯನ್ನು ಘೋಷಿಸಿರುತ್ತದೆ.

ಆದಕಾರಣ, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ಕೇಂದ್ರ ಕಛೇರಿ ಹಾಗೂ ಎಲ್ಲಾ ವಲಯ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ/ಹೊರಗುತ್ತಿಗೆ/ಗುತ್ತಿಗೆ ಆಧಾರದ ಎಲ್ಲಾ ಅಧಿಕಾರಿ/ನೌಕರರುಗಳಿಗೆ ಮತದಾನ ಮಾಡಲು ಅನುಕೂಲವಾಗುವಂತೆ ಪ್ರಜಾಪ್ರತಿನಿಧಿ ಕಾಯ್ದೆ 1951 ಕಲಂ 135(ಬಿ) ಅಡಿಯಲ್ಲಿನ ಎಲ್ಲಾ ಉಪಬಂಧಗಳಿಗೆ ಒಳಪಟ್ಟು ದಿನಾಂಕ:18-04-2019 ಮತ್ತು 23-04-2019 ರಂದು ಆಯಾ ಚುನಾವಣಾ ಕ್ಷೇತ್ರಗಳಿಗೆ ಅನ್ವಯವಾಗುವಂತೆ ಸೀಮಿತಗೊಳಿಸಿ ವೇತನ ಸಹಿತ ಸಾರ್ವತ್ರಿಕ ರಜೆಯನ್ನು ಘೋಷಿಸಲಾಗಿದೆ.

12/4/19

ಸಹಾಯಕ ಆಯುಕ್ತರು

ಗೆ.

ಮಂಡಳಿಯ ಕೇಂದ್ರ ಕಛೇರಿ ಹಾಗೂ ವಲಯ ಕಛೇರಿಯ ಎಲ್ಲಾ ಅಧಿಕಾರಿ/ನೌಕರರುಗಳಿಗೆ (ಗುತ್ತಿಗೆ ಹಾಗೂ ಹೊರಗುತ್ತಿಗೆ ನೌಕರರುಗಳನ್ನು ಒಳಗೊಂಡಂತೆ).